ಶ್ರೀ ಡಿ.ವಿ. ಸದಾನಂದ ಗೌಡ (ಮುಖ್ಯಮಂತ್ರಿಗಳು):–

ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಗಾಂಧೀನಗರ, ಮಲ್ಲೇಶ್ವರ ಮತ್ತು ರಾಜರಾಜೇಶ್ವರಿ ನಗರ ಇಂಜಿನಿಯರಿಂಗ್ ವಿಭಾಗಗಳ ವ್ಯಾಪ್ತಿಯಲ್ಲಿ 2008–09ರಿಂದ ಇದುವರೆವಿಗೆ ನಡೆದಿರುವ ಕಾಮಗಾರಿಗಳ ಅನುಷ್ಠಾನದ ಬಗ್ಗೆ ಪಾಲಿಕೆಯ ಮುಖ್ಯ ಅಭಿಯಂತರರು (ಪಿಪಿಇಡಿ ಮತ್ತು ವಿಜಿಲೆನ್ಸ್) ಇವರಿಂದ ಪ್ರಾಥಮಿಕ ತನಿಖೆ ನಡೆಸಿದಾಗ ಈ ಮೂರು ವಿಭಾಗಗಳಲ್ಲಿ 1539.62 ಕೋಟಿ ರೂಪಾಯಿ ಮೊತ್ತದ ಕಾಮಗಾರಿಗಳನ್ನು ನಿರ್ವಹಿಸಲಾಗಿದ್ದು, ಈ ಪೈಕಿ ಲಭ್ಯವಾದ 153 ಕಡತಗಳಿಗೆ ಸಂಬಂಧಿಸಿದ ಕಾಮಗಾರಿಗಳ ಸ್ಥಳ ಪರಿಶೀಲನೆ ನಡೆಸಿದಾಗ ಸುಮಾರು 5.22 ಕೋಟಿ ರೂ ಮೊತ್ತದ ಕಾಮಗಾರಿಗಳನ್ನು ನಿರ್ವಹಿಸದೇ ಪಾವತಿಸಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ.

ಆ) ಸರ್ಕಾರದ ಆದೇಶ ಸಂಖ್ಯೆ: ಓಇ 130 ಸಿಐಡಿ 2011, ದಿನಾಂಕ: 07–12–2011ರಲ್ಲಿ ಪ್ರಕರಣವನ್ನು ಸಿ.ಐ.ಡಿ. ತನಿಖೆಗೆ ವಹಿಸಿದೆ.

ಬಿ.ಬಿ.ಎಂ.ಪಿ. ಕಛೇರಿಯಲ್ಲಿ ಬೆಂಕಿ ಆಕಸ್ಮಿಕ

571 (406) ಶ್ರೀ ರಾಮಲಿಂಗಾರೆಡ್ಡಿ (ಬಿ.ಟಿ.ಎಂ ಲೇಔಟ್):– ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ?

ಅ) ಬಿ.ಬಿ.ಎಂ.ಪಿ. ಕಚೇರಿಯಲ್ಲಿ ದಿನಾಂಕ: 19–11–2011ರಂದು ಬೆಂಕಿ ಆಕಸ್ಮಿಕ ಸಂಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ಬೆಂಕಿ ಆಕಸ್ಮಿಕಕ್ಕೆ ಕಾರಣಗಳೇನು?

ಇ) ಈ ಬೆಂಕಿ ಅವಘಡದಲ್ಲಿ ಬಹುಕೋಟಿ ಹಗರಣಕ್ಕೆ ಸಂಬಂಧಪಟ್ಟಂತೆ ದಾಖಲೆಗಳು ನಾಶವಾಗಿವೆಯೇ;

ಈ) ಈ ಬೆಂಕಿ ಅಪಘಾತಕ್ಕೆ ಸಂಬಂಧಪಟ್ಟಂತೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಡಿ.ವಿ. ಸದಾನಂದ ಗೌಡ (ಮುಖ್ಯಮಂತ್ರಿಗಳು):–

ಅ) ಹೌದು, ಬಂದಿದೆ.

ಆ) ಈ ಬೆಂಕಿ ಆಕಸ್ಮಿಕಕ್ಕೆ ಸಂಬಂಧಿಸಿದಂತೆ ಅಲಸೂರು ಪೊಲೀಸ್ ಠಾಣೆಯಲ್ಲಿ ಮೊಕದ್ದಮೆ ಸಂಖ್ಯೆ: 293/11 ರಲ್ಲಿ ಪ್ರಕರಣವನ್ನು ದಾಖಲಿಸಲಾಗಿದೆ. ಪ್ರಕರಣದ ತನಿಖೆಯು ಪ್ರಗತಿಯಲ್ಲಿರುತ್ತದೆ. ತನಿಖೆಯ ನಂತರ ಬೆಂಕಿ ಆಕಸ್ಮಿಕಕ್ಕೆ ಕಾರಣಗಳು ತಿಳಿದುಬರುತ್ತವೆ.

ಇ) ಬೆಂಗಳೂರು ಮಹಾನಗರ ಕಾರ್ಯಚರಣೆ ಪಡೆ ಪೊಲೀಸ್ ಠಾಣೆಗೆ ಸಂಬಂಧಿಸಿದಂತಹ ಒಟ್ಟು 61 ಕಡತಗಳು ಅಂದರೆ ಅರ್ಜಿಗಳ ವಿಚಾರಣೆ ಮುಗಿಸಿರುವ ಕಡತಗಳು, ತನಿಖೆ ಹಾಗೂ ನ್ಯಾಯಾಲಯ ವಿಚಾರಣೆಯಲ್ಲಿರುವ ಕಡತಗಳು, ಪ್ರಕರಣಗಳಲ್ಲಿ ಅಮಾನತ್ತು ಪಡಿಸಿರುವ ದಾಖಲಾತಿಗಳು ಹಾಗೂ ಇತರೆ ಕಡತಗಳು ಬೆಂಕಿ ಅವಘಡದಲ್ಲಿ ನಾಶವಾಗಿವೆ.

ಈ) ಬೆಂಕಿ ಆಕಸ್ಮಿಕಕ್ಕೆ ಸಂಬಂಧಿಸಿದಂತೆ ಅಲಸೂರು ಪೊಲೀಸ್ ಠಾಣೆಯಲ್ಲಿ ಮೊಕದ್ದಮೆ ಸಂಖ್ಯೆ: 293/11 ರಲ್ಲಿ ಪ್ರಕರಣವನ್ನು ದಾಖಲಿಸಲಾಗಿದೆ.

ಎಸ್.ಡಿ.ಎ. ಮತ್ತು ಎಫ್.ಡಿ.ಎ ಪರೀಕ್ಷೆ

572 (408) ಶ್ರೀ ರಾಮಲಿಂಗಾರೆಡ್ಡಿ (ಬಿ.ಟಿ.ಎಂ ಲೇಜೌಟ್):– ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ?

ಅ) ಕರ್ನಾಟಕ ಲೋಕಸೇವಾ ಆಯೋಗವು ಜೂನ್ 2010ರಲ್ಲಿ ಎಸ್.ಡಿ.ಎ ಮತ್ತು ಎಫ್.ಡಿ.ಎ. ಪರೀಕ್ಷೆಗಳನ್ನು ನಡೆಸಲಾಗಿದೆಯೇ;

ಆ) ಹಾಗಿದ್ದಲ್ಲಿ, ಎಷ್ಟು ಹುದ್ದೆಗಳ ಭರ್ತಿಗಾಗಿ ಈ ಪರೀಕ್ಷೆಗಳನ್ನು ನಡೆಸಲಾಯಿತು;

ಇ) ಈ ಪರೀಕ್ಷೆಗಳಿಗೆ ಹಾಜರಾದ ಅಭ್ಯರ್ಥಿಗಳ ಸಂಖ್ಯೆ ಎಷ್ಟು;

ಈ) ಈ ಪರೀಕ್ಷೆಗಳಿಂದ ಪಡೆದ ಒಟ್ಟು ಶುಲ್ಕದ ಹಣವೆಷ್ಟು;

ಉ) ಈ ಪರೀಕ್ಷೆಗಳ ಫಲಿತಾಂಶವನ್ನು ಪ್ರಕಟಿಸಲಾಗಿದೆಯೇ;

ಊ) ಇಲ್ಲದಿದ್ದಲ್ಲಿ, ಯಾವಾಗ ಪ್ರಕಟಿಸಲಾಗುವುದು ಹಾಗೂ ಯಾವಾಗ ಈ ಹುದ್ದೆಗಳನ್ನು ಭರ್ತಿ ಮಾಡಲಾಗುವುದು?

ಶ್ರೀ ಡಿ.ವಿ. ಸದಾನಂದ ಗೌಡ (ಮುಖ್ಯಮಂತ್ರಿಗಳು):–

ಅ) ಕರ್ನಾಟಕ ಲೋಕಸೇವಾ ಆಯೋಗವು ಪ್ರಥಮ ದರ್ಜೆ ಸಹಾಯಕ ಮತ್ತು ದ್ವಿತೀಯ ದರ್ಜೆ ಸಹಾಯಕ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಜೂನ್ 2011ರಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಿರುತ್ತದೆ.

ಆ) ಪ್ರಥಮ ದರ್ಜೆ ಸಹಾಯಕರ 1,195 ಮತ್ತು ದ್ವಿತೀಯ ದರ್ಜೆ ಸಹಾಯಕ 1,551 ಹುದ್ದೆಗಳಿಗೆ ಪರೀಕ್ಷೆಗಳನ್ನು ನಡೆಸಲಾಯಿತು.